# ಮಾಸ ಭವಿಷ್ಯ

ಅರುಣ ಪಿ. ಭಟ್



**ಮೇಷ:** ಮನೆಯ ದುರಸ್ತಿ, ನವೀಕರಣಕ್ಕೆ ಹಣ ಖರ್ಚು ಮಾಡುವಿರಿ. ದಾನ–ಧರ್ಮ ಕಾರ್ಯಗಳಲ್ಲಿ ಆಸಕ್ತಿ. ವ್ಯಾಪಾರ, ಉದ್ಯೋಗದಲ್ಲಿ ದೊಡ್ಡ ಅಧಿಕಾರಿಗಳು, ವ್ಯವಹಾರಸ್ಥರ ಜೊತೆ ಮಾತುಕತೆ. ಸೋದರ ಸೋದರಿಯರ ಜೊತೆ ಬಾಂಧವ್ಯ ಗಟ್ಟಿಯಾಗುತ್ತದೆ. ಆರೋಗ್ಯದಲ್ಲಿ ಏರಿಳಿತ. ಶುಭ: 12, 21, 26 ಅಶುಭ 18, 20, 24.



**ವೃಷಭ:** ತಿಂಗಳ ಶುರುವಿನಿಂದಲೇ ಉತ್ಸಾಹ. ನಿಮ್ಮ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯುವಿರಿ, ಇದರಿಂದ ಸಂತುಷ್ಟರಾಗುವಿರಿ. ಸಹೋದ್ಯೋಗಿಗಳ ಜೊತೆ ಇರುವ ಭಿನ್ನಾಭಿಪ್ರಾಯಗಳನ್ನು ಮರೆಯಲು ಪ್ರಯತ್ನಿಸಿ. ವ್ಯವಹಾರ ವಿಸ್ತರಣೆಗೆ ಮುಖ್ಯ ತೀರ್ಮಾನ ಕೈಗೊಳ್ಳಲಿದ್ದೀರಿ. ಶುಭ: 11, 18, 29 ಅಶುಭ: 15, 23, 28



**ಮಿಥುನ:** ವ್ಯಾಪಾರ, ವ್ಯವಹಾರ, ಉದ್ಯಮಕ್ಕೆ ಇದು ಸಕಾಲ. ಆರೋಗ್ಯ ಉತ್ತಮ. ಅಂದುಕೊಂಡ ಕೆಲಸಗಳು ಪೂರ್ಣಗೊಳ್ಳುತ್ತವೆ. ಉದ್ಯೋಗದಲ್ಲಿ ಗುಣಮಟ್ಟದ ವೇಗ ಕಂಡುಕೊಳ್ಳಲು ಸಾಧ್ಯವಾಗುತ್ತದೆ. ಸಾಮಾಜಿಕ ಸ್ಥಾನಮಾನ ಹೆಚ್ಚಾಗಲಿದೆ, ಇದರಿಂದ ಉತ್ಸಾಹವೂ ಹೆಚ್ಚಲಿದೆ. ಶುಭ: 12, 16, 22 ಅಶುಭ: 21, 26, 29



**ಕರ್ಕ:** ಶೈಕ್ಷಣಿಕ ವಲಯದಲ್ಲಿರುವವರಿಗೆ, ವಿದ್ಯಾರ್ಥಿಗಳಿಗೆ ಉತ್ತಮ ಸಮಯ. ಬಡ್ತಿ ಯೋಗವಿದೆ. ಆರೋಗ್ಯದ ಬಗ್ಗೆ ಕಾಳಜಿ ಅತ್ಯಗತ್ಯ. ಮುಂಬರುವ ದಿನಗಳಲ್ಲಿ ಹಲವು ಸಕಾರಾತ್ಮಕ ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರಲಿವೆ. ವಿವಿಧ ಮೂಲಗಳಿಂದ ಹಣ ಕೈಸೇರಲಿದೆ. ಶುಭ: 21, 26, 29 ಅಶುಭ: 24, 28, 30.



**ಸಿಂಹ:** ಕೆಲಸದ ಸ್ಥಳದಲ್ಲಿ ಪ್ರಶಸ್ತಿ, ಗೌರವ ಲಭಿಸುವ ಯೋಗವಿದೆ. ಕಿರು ಪ್ರಯಾಣ ಮಾಡಬೇಕಾಗಿ ಬರಬಹುದು. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವಿರಿ. ವೃತ್ತಿಪರ ಕೆಲಸಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ಮಾಡುವಿರಿ. ಕುಟುಂಬದಲ್ಲಿ ಸಂತೋಷ, ಆದಾಯದಲ್ಲಿ ಹೆಚ್ಚಳ. ಶುಭ: 10, 15, 22 ಅಶುಭ: 18, 20, 24.



**ಕನ್ಯಾ:** ಕುಟುಂಬ ಸದಸ್ಯರು–ಬಂಧುಗಳೊಂದಿಗೆ ಉತ್ತಮವಾದ ಕ್ಷಣಗಳನ್ನು ಕಳೆಯಲಿದ್ದೀರಿ. ಸರಿಯಾದ ಸಮಯಕ್ಕೆ ವಿರೋಧಿಗಳಿಗೆ ತಕ್ಕ ಪ್ರತ್ಯುತ್ತರ ನೀಡಲಿದ್ದೀರಿ. ಸಾಮಾಜಿಕ, ರಾಜಕೀಯ ಕ್ಷೇತ್ರದಲ್ಲಿ ಇರುವವರಿಗೆ ಮನ್ನಣೆ ಸಿಗಲಿದೆ. ಆರೋಗ್ಯ ಸಮಸ್ಯೆಗಳಿಗೆ ವೈದ್ಯರನ್ನು ಕಾಣಿ. ಶುಭ: 16, 18, 22. ಅಶುಭ: 17, 19, 20.



**ತುಲಾ:** ವೈಯಕ್ತಿಕ ಹಾಗೂ ವೃತ್ತಿಪರ ಬದುಕಿನಲ್ಲಿ ಮಹತ್ತರವಾದ ಪ್ರಗತಿ ಕಾಣಲಿದೆ. ಮನೆಗೆ ಎಲೆಕ್ಟ್ರಾನಿಕ್ ವಸ್ತುಗಳ ಖರೀದಿ ಮಾಡಲಿದ್ದೀರಿ. ಸಿನಿಮಾ, ವೈದ್ಯಕೀಯ, ಕಲೆ ಈ ರೀತಿಯ ವೃತ್ತಿಯಲ್ಲಿ ಇರುವವರಿಗೆ ಲಾಭವಿದೆ. ಶೈಕ್ಷಣಿಕ ಅರ್ಹತೆ ಹೆಚ್ಚಿಸಿಕೊಳ್ಳಲು ಪ್ರಯತ್ನಿಸುತ್ತೀರಿ. ಶುಭ: 12, 18, 20 ಅಶುಭ: 14, 16, 22.



**ವೃಶ್ಚಿಕ:** ಈ ಅವಧಿಯಲ್ಲಿ ತಾಳ್ಮೆ ಧೈರ್ಯ ಬಹಳ ಮುಖ್ಯ. ತಿಂಗಳ ಮಧ್ಯ ಭಾಗದಲ್ಲಿ ವ್ಯಾಪಾರ ವ್ಯವಹಾರಗಳ ವಿಸ್ತರಣೆಗೆ ಶ್ರಮ ಹಾಕುತ್ತೀರಿ. ಕೆಲಸ ಕಾರ್ಯಗಳಲ್ಲಿ ಸಕಾರಾತ್ಮಕ ಬದಲಾವಣೆಗಳಾಗಲಿವೆ. ಆರ್ಥಿಕ ಸ್ಥಿತಿ ಅತ್ಯುತ್ತಮವಾಗಿರುತ್ತದೆ. ಸಂಬಂಧಗಳು ಉತ್ತಮವಾಗಿರುತ್ತವೆ. ಶುಭ: 14, 16, 18 ಅಶುಭ: 12, 18, 22.



**ಧನು:** ಆಸ್ತಿ ಖರೀದಿಗೆ ಸಂಬಂಧಿಸಿದಂತೆ ಕಾಗದಪತ್ರಗಳನ್ನು ಪರಿಶೀಲನೆ ಮಾಡುವಿರಿ. ದೊಡ್ಡ ಪ್ರಮಾದಗಳನ್ನು ತಡೆಯಲು ಈ ಕ್ರಮ ಅತ್ಯಗತ್ಯ. ಭುಜ ನೋವು, ತಲೆ ನೋವು ಹಾಗೂ ಕಣ್ಣಿನ ಬೇನೆ ಕಾಡಲಿದೆ. ವೈಯಕ್ತಿಕ ಸಂಬಂಧದಲ್ಲಿ ಕೆಲವು ಕಹಿ ಬೆಳವಣಿಗೆಗಳು ಕಂಡುಬರಬಹುದು. ಶುಭ: 14, 25, 28 ಅಶುಭ: 12, 16, 22.



**ಮಕರ:** ಪ್ರತಿಷ್ಠಿತ ಸಂಸ್ಥೆಯೊಂದರ ಜೊತೆಗೆ ಮಹತ್ವದ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆಗಳಿವೆ. ವ್ಯಾಪಾರ ಉದ್ಯಮ ವಿಸ್ತರಣೆಗೆ ಮುಖ್ಯ ತೀರ್ಮಾನವನ್ನು ಕೈಗೊಳ್ಳಲಿದ್ದೀರಿ. ಮನೆಗೆ ಅಗತ್ಯ ವಸ್ತುಗಳ ಖರೀದಿ ಮಾಡುವಿರಿ. ವೈವಾಹಿಕ ಜೀವನ ಸಂತೋಷದಾಯಕವಾಗಿರುತ್ತದೆ. ಶುಭ: 11, 16, 24 ಅಶುಭ: 12, 17, 19.



**ಕುಂಭ:** ಹಣದ ಸದುಪಯೋಗ ಮಾಡಿಕೊಳ್ಳುವ ಬಗ್ಗೆ ಯೋಜನೆ ರೂಪಿಸಲಿದ್ದೀರಿ. ಮಾರಾಟ ಕ್ಷೇತ್ರದಲ್ಲಿರುವವರಿಗೆ ಲಾಭ. ಹಾಕಿಕೊಂಡ ಗುರಿಯನ್ನು ಅಂದುಕೊಂಡ ಸಮಯಕ್ಕಿಂತ ಮುಂಚಿತವಾಗಿಯೇ ತಲುಪುವ ಸಾಧ್ಯತೆ. ಸಂಗಾತಿಯ ಭಾವನೆಗಳಿಗೆ ಗೌರವ ನೀಡಿ. ಶುಭ: 14, 18, 21 ಅಶುಭ: 12, 19, 22.



**ಮೀನ:** ಉನ್ನತ ಶಿಕ್ಷಣದಲ್ಲಿ ಯಶಸ್ಸು. ಉದ್ಯೋಗದಲ್ಲಿ ಭಾವನಾತ್ಮಕ ನಿರ್ಧಾರಗಳನ್ನು ತೆಗೆದುಕೊಳ್ಳಲಿದ್ದೀರಿ. ತಿಂಗಳ ಮಧ್ಯ ಭಾಗದಲ್ಲಿ ವೃತ್ತಿಪರ ಜೀವನದಲ್ಲಿ ಅತ್ಯುತ್ತಮವಾದ ಬೆಳವಣಿಗೆ ಕಾಣಲಿದೆ. ಆರೋಗ್ಯದಲ್ಲಿ ಚೇತರಿಕೆ, ನೆಮ್ಮದಿ. ಆದಾಯದಲ್ಲಿ ಹೆಚ್ಚಳ. ಶುಭ: 14, 18, 24 ಅಶುಭ: 16, 25, 27.